ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಕೃಷಿ ಭಾಗ್ಯ ಯೋಜನೆಯಡಿ ನಿರ್ಮಿಸಿರುವ ಹೊಂಡಗಳ ಬಗ್ಗೆ

ಶ್ರೀಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

362 (376) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯಡಿ ನಿರ್ಮಿಸಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸಹಾಯಧನ ಪಾವತಿಗೆ ಬಾಕಿಯಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ;

(ಇ) ರೈತರು ವಂತಿಕೆ ಪಾವತಿಸಿ ಪಾಲಿಥಿನ್ ಹೊದಿಕೆ ಅಳವಡಿಸಲು ಬಾಕಿ ಇರುವ ಹೊಂಡಗಳ ಸಂಖ್ಯೆ ಎಷ್ಟು ;

(ಈ) ಕೋವಿಡ್-19ರ ಅವಧಿಯಲ್ಲಿ ಮುಸುಕಿನ ಜೋಳ ಬೆಳೆದು ಸಂಕಷ್ಟಕ್ಕೆ ಈಡಾಗಿರುವ ರೈತರಿಗೆ ರೂ.5000 ಗಳ ಆರ್ಥಿಕ ನೆರವನ್ನು ಡಿ.ಬಿ.ಟಿ ಮುಖಾಂತರ ನೀಡಲಾಗಿರುವ ರೈತರ ಸಂಖ್ಯೆ ಮೊತ್ತ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಕೃಷಿ ಇಲಾಖೆಯಲ್ಲಿ ತಾಲ್ಲೂಕುವಾರು ಮಂಜೂರಾಗಿರುವ, ಭರ್ತಿಯಾಗಿರುವ ಮತ್ತು ಖಾಲಿ ಇರುವ ಸಹಾಯಕ ಕೃಷಿ ಅಧಿಕಾರಿಗಳು, ಕೃಷಿ ಅಧಿಕಾರಿಗಳು ಹಾಗೂ ಸಹಾಯಕ ಕೃಷಿ ನಿರ್ದೇಶಕರುಗಳ ಸಂಖ್ಯೆ ಎಷ್ಟು ?